ಮಾರ್ಪಾಡಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗಳನ್ನು ಸಧ್ಯದಲ್ಲಿಯೇ ನಿಗಮದ ತಾಂತ್ರಿಕ ಉಪಸಮಿತಿಯ ಅನುಮೋದನೆಗಾಗಿ ಮಂಡಿಸುವ ಹಂತದಲ್ಲಿರುತ್ತವೆ.

ಇ) ಬ್ಯಾರೇಜುಗಳ ಪರಿಷ್ಕರಿಸಿದ ವಿನ್ಯಾಸ, ನಕ್ಷೆ ಮತ್ತು ಅಂದಾಜು ಪಟ್ಟಿಗಳು ನಿಗಮದ ತಾಂತ್ರಿಕ ಉಪಸಮಿತಿಯ ಅನುಮೋದನೆ ಪಡೆದುಕೊಂಡು ನಾಲ್ಕು ತಿಂಗಳ ಅವಧಿಯೊಳಗೆ ಪ್ರಾರಂಭಿಸಲು ಹಾಗೂ ಎರಡು ವರ್ಷ ಕಾಲಾವಧಿಯೊಳಗಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

315(686) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಂವಿಧಾನದ 74ನೇ ತಿದ್ದುಪಡಿ ಪ್ರಕಾರ ನಗರಸಭೆಗೆ ಸ್ವಾಯಕ್ತತೆ ನೀಡುವ ಬಗ್ಗೆ ಸರ್ಕಾರ ಉದ್ದೇಶಿಸಿದೆಯೇ ;

ಆ) ನಗರಸಭೆಗಳಿಗೆ ನಿಯಮಾನುಸಾರ ರಾಜ್ಯ ಸರ್ಕಾರದ ಅನುದಾನ ಬಿಡುಗಡೆಯಾಗಿದೆಯೇ;

ಇ) ನಗರಸಭೆಯ ಆಡಳಿತ ಸುಧಾರಣೆಗೆ ಸಂಬಂಧಿಸಿದಂತೆ ಉಡುಪಿ ನಗರಸಭೆಯಲ್ಲಿ ಖಾಲಿ ಇರುವ ಸಿಬ್ಬಂದಿಗಳನ್ನು ಯಾವಾಗ ನೇಮಿಸಿಕೊಳ್ಳಲಾಗುವುದು;

ಈ) ನಗರಸಭೆಗಳಿಗೆ ಅಧ್ಯಕ್ಷ ಉಪಾಧ್ಯಕ್ಷರ ಮೀಸಲಾತಿಯನ್ನು ಯಾವಾಗ ಪ್ರಕಟಿಸಲಾಗುವುದು; ನಗರ ಸಭೆಗಳಲ್ಲಿ ಅಧ್ಯಕ್ಷ ಮೀಸಲಾತಿ ಘೋಷಣೆ ಆಗದೇ ಆಡಳಿತ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಎನ್.ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ರಾಜ್ಯ ಹಣಕಾಸು ಆಯೋಗದ ಅನುದಾನದ ಅಡಿ ನಿಯಮಾನುಸಾರ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಇ) ನಗರಸಭೆಯಲ್ಲಿ ಖಾಲಿ ಇರುವ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪತ್ರ ಬರೆದು ಕ್ರಮ ತೆಗೆದುಕೊಳ್ಳಲಾಗಿದೆ ಹಾಗೂ ಇತರೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

ಈ) ಮೀಸಲಾತಿ ಸಂಬಂಧ ಅಧಿಸೂಚನೆ ಹೊರಡಿಸಿದ್ದು ಸದರಿ ಅಧಿಸೂಚನೆಗೆ ಉಚ್ಚ ನ್ಯಾಯಾಲಯವು ತಡೆ ಆಜ್ಞೆ ನೀಡಿದೆ ಹಾಗೂ ವಿಷಯವು ನ್ಯಾಯಾಲಯದ ಮುಂದೆ ವಿಚಾರಣೆಯಲ್ಲಿದೆ.

316(687) ಶ್ರೀ ರಘುಪತಿ ಭಟ್ ಕೆ. (ಉಡುಪಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಖಾಸಗಿ ಮಾಲಿಕರುಗಳು ತಮ್ಮ ಸ್ವಂತಕ್ಕೆಂದು ಪರವಾನಿಗೆ ಪಡೆದಿರುವ ಕಾರುಗಳಲಿ ಬಾಡಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?